ಓ ಎಸ ನಂ. **61/2022**
ಪಿಡಬ್ಲೂ-**1** ( ಮೊಗಲಯ್ಯ )

<u>ಇಂದು ದಿನಾಂಕಃ **25-11-2022** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಶ್ರೀ ಎಸ್.ಕೆ.ಡಿ ವಕೀಲರಿಂದ (ವಾದಿ ಪರ)</u>

ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ದಿನಾಂಕಃ 23-11-1981 ರ ಕ್ರಯ ಪತ್ರದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು, ದಿನಾಂಕಃ 28-04-1982 ರ ಕ್ರಯ ಪತ್ರದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು, ದಿನಾಂಕಃ 20-05-1985 ರ ಕ್ರಯ ಪತ್ರದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು, ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-4 ರಿಂದ ನಿಪಿ-13 ಎಂದು ಗುರುತಿಸಲಾಯಿತು, ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಪಹಣಿಗಳ ದೃಢಿಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-14 ರಿಂದ ನಿಪಿ-17 ಎಂದು ಗುರುತಿಸಲಾಯಿತು, ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-18 ಎಂದು ಗುರುತಿಸಲಾಯಿತು, ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಟೊಂಚ ನಕಾಶೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-19 ರಿಂದ ನಿಪಿ-22 ಎಂದು ಗುರುತಿಸಲಾಯಿತು, ದಿನಾಂಕಃ 07-06-2022 ರ ತಹಶೀಲ್ದಾರವರು ನೀಡಿರುವಂತಹ ಹಿಂಬರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-23 ಎಂದು ಗುರುತಿಸಲಾಯಿತು, ದಿನಾಂಕಃ 07-06-2022 ರ ತಹಶೀಲ್ದಾರವರು ನೀಡಿರುವಂತಹ ಹಿಂಬರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-24 ಎಂದು ಗುರುತಿಸಲಾಯಿತು, ನನ್ನ ಕುಟುಂಬಕ್ಕೆ ಸಂಬಂಧಪಟ್ಟಂತೆ ವಂಶವೃಕ್ಷದ ದೃಢಿಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-25 ಎಂದು ಗುರುತಿಸಲಾಯಿತು.

ಕಾರಣ ದಾವೆಯಲ್ಲಿ ಕೇಳಿದಂತೆ ದಾವೆಯನ್ನು ಡಿಕ್ರಿ ಮಾಡಲು ವಿನಂತಿಸಿಕೊಳ್ಳುತ್ತೇನೆ

(ಪ್ರತಿವಾದಿಗಳ ಪರ ವಕೀಲರ ವಿನಂತಿ ಮೇರೆಗೆ ಪಾಟೀ ಸವಾಲಿಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ.ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಮ್.ಎಫ್.ಸಿ, ಸೇಡಂ.